1 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂ.ರವರ ನ್ಯಾಯಾಲಯ, ತರೀಕೆರೆ.

## ಕ್ರಿಮಿನಲ್ ಮೊಕದ್ದಮೆ ಸಂಖ್ಯೆ 49/2025

ಪಿರ್ಯಾದಿ ः ರಾಜ್ಯದ ಪರವಾಗಿ ಲಿಂಗದಹಳ್ಳಿ ಪೊಲೀಸರು

- ವಿರುದ್ಧ -

ಆರೋಪಿ/ತರು ः ಚಂದಪ್ಪ ಬಿನ್ ಮಲ್ಲೇಶಪ್ಪ, 55 ವರ್ಷ,
ವಾಸ ः ದೋರನಾಳು ಗ್ರಾಮ, ಕಸಬಾ ಹೋಬಳಿ,
ತರೀಕೆರೆ ತಾಲ್ಲೂಕು

****

ಅ ಪಾ ದ ನೆ

ದಿನಾಂಕ 01.01.2025 ರಂದು ಸಂಜೆ 04.00 ಗಂಟೆ ಸಮಯದಲ್ಲಿ ಲಿಂಗದಹಳ್ಳಿ ಪೊಲೀಸ್ ಠಾಣಾ ಸರಹದ್ದಿನ, ದೋರನಾಳು ಗ್ರಾಮದ ಹನುಮಂತಪ್ಪರವರ ಮನೆಯ ಹತ್ತಿರ ದೋರನಾಳು-ಸುಣ್ಣದಹಳ್ಳಿ ಟಾರು ರಸ್ತೆಯಲ್ಲಿ ಚಾಸಾ-5 ಸುರೇಶರವರು ನಡೆದುಕೊಂಡು ಬರುತ್ತಿರುವಾಗ, ಆರೋಪಿಯಾದ ನೀವು ಈ ಹಿಂದೆ ನಿಮಗೂ ಹಾಗೂ ಚಾಸಾ-5 ಸುರೇಶ ಮತ್ತು ಚಾಸಾ-1 ಚೈತ್ರರವರಿಗೂ ಗ್ಯಾಸ್ ಸಿಲಿಂಡರ್ ವಿಚಾರದಲ್ಲಿ ನಡೆದ ಗಲಾಟೆಯ ವಿಚಾರವಾಗಿ ಮನಸ್ಸಿನಲ್ಲಿ ದ್ವೇಷವನ್ನಿಟ್ಟುಕೊಂಡು ಚಾಸಾ-5 ರವರನ್ನು ಅಡ್ಡಗಟ್ಟಿ ನಿಲ್ಲಿಸಿದ್ದು, ಆದಕಾರಣ ಆರೋಪಿಯಾದ ನೀವು ಭಾರತೀಯ ನ್ಯಾಯ ಸಂಹಿತೆ ಕಲಂ 126(2)ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಎಸಗಿದ್ದೀರಿ ಎಂದು ನಿಮ್ಮ ಮೇಲೆ ಆಪಾದನೆ ಇದೆ.

ಎರಡನೇಯದಾಗಿ, ಅದೇ ದಿನ, ಅದೇ ಸಮಯ ಹಾಗೂ ಅದೇ ಸ್ಥಳದಲ್ಲಿ ಆರೋಪಿಯಾದ ನೀವು ಚಾಸಾ-5 ರವರನ್ನು ಅಡ್ಡಗಟ್ಟಿ ನಿಲ್ಲಿಸಿ, ಏನೋ ಬೋಳಿಮಗನೆ, ಸೂಳೆಮಗನೇ ಗ್ಯಾಸ್ ಸಿಲಿಂಡರ್ ವಿಚಾರವಾಗಿ ನೀನು ನನ್ನ ಬಗ್ಗೆ ಅವರಿವರಿಗೆ ಹೇಳುತ್ತಿಯಾ ಎಂದು ಅವಾಚ್ಯ ಶಬ್ದಗಳಿಂದ ಬೈದು ಅವಮಾನ ಮಾಡಿದ್ದು, ಆದಕಾರಣ ಆರೋಪಿಯಾದ ನೀವು ಭಾರತೀಯ ನ್ಯಾಯ ಸಂಹಿತೆ ಕಲಂ 352 ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಎಸಗಿದ್ದೀರಿ ಎಂದು ನಿಮ್ಮ ಮೇಲೆ ಆಪಾದನೆ ಇದೆ.

ಮೂರನೇಯದಾಗಿ, ಅದೇ ದಿನ, ಅದೇ ಸಮಯ ಹಾಗೂ ಅದೇ ಸ್ಥಳದಲ್ಲಿ ಆರೋಪಿಯಾದ ನೀವು ಕೈಯಿಂದ ಚಾಸಾ-5 ರವರ ಎರಡೂ ಕೆನ್ನೆಗಳಿಗೆ, ಮುಖಕ್ಕೆ, ಕುತ್ತಿಗೆಗೆ, ಎರಡು ಭುಜಗಳಿಗೆ ಹಾಗೂ ಪಕ್ಕೆಗೆ ಹೊಡೆದು, ಚಾಸಾ-5 ರವರನ್ನು ಕೆಳಗೆ ಬೀಳಿಸಿ ಕಾಲಿನಿಂದ ಮೈ ಕೈಗೆ, ಹೊಟ್ಟೆಗೆ ಒದ್ದು, ಚಾಸಾ-5 ರವರಿಗೆ ಸಾಮಾನ್ಯ ಸ್ವರೂಪದ ಗಾಯಗಳನ್ನುಂಟು ಮಾಡಿದ್ದು, ಆದಕಾರಣ ಆರೋಪಿಯಾದ ನೀವು ಭಾರತೀಯ ನ್ಯಾಯ ಸಂಹಿತೆ ಕಲಂ 115(2) ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಎಸಗಿದ್ದೀರಿ ಎಂದು ನಿಮ್ಮ ಮೇಲೆ ಆಪಾದನೆ ಇದೆ.

ಕೊನೆಯದಾಗಿ, ಅದೇ ದಿನ, ಅದೇ ಸಮಯ ಹಾಗೂ ಅದೇ ಸ್ಥಳದಲ್ಲಿ ಆರೋಪಿಯಾದ ನೀವು ಚಾಸಾ-5 ರವರನ್ನು ಉದ್ದೇಶಿಸಿ ಇನ್ನೊಂದು ಬಾರಿ ನನ್ನ ಬಗ್ಗೆ ಊರಿನಲ್ಲಿ ಎಲ್ಲಿಯಾದರೂ ಏನನ್ನಾದರೂ ಮಾತನಾಡಿದರೆ ನಿನ್ನನ್ನು ಜೀವ ಸಹಿತ ಬಿಡುವುದಿಲ್ಲವೆಂದು ಕೊಲೆ ಬೆದರಿಕೆ ಹಾಕಿದ್ದು, ಆದಕಾರಣ ಆರೋಪಿಯಾದ ನೀವು ಭಾರತೀಯ ನ್ಯಾಯ ಸಂಹಿತೆ ಕಲಂ 351(2) ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಎಸಗಿದ್ದೀರಿ ಎಂದು ನಿಮ್ಮ ಮೇಲೆ ಆಪಾದನೆ ಇದೆ.

ಪ್ರಶ್ನೆ 1) ಈಗ ಓದಿ ಹೇಳಲಾದ ಆರೋಪಣೆಯನ್ನು ಕೇಳಿ ತಿಳಿದುಕೊಂಡಿರಾ?
ಉತ್ತರಃ- ಕೇಳಿದ್ದೇನೆ

ಪ್ರಶ್ನೆ 2) ನೀವು ಆರೋಪಣೆಯನ್ನು ಒಪ್ಪಿಕೊಳ್ಳುವಿರೋ ಅಥವಾ ವಿಚಾರಣೆಯಾಗಬೇಕೆ?
ಉತ್ತರಃ- ವಿಚಾರಣೆಯಾಗಬೇಕು

(ಮೇಲ್ಕಂಡ ಆಪಾದನೆಯನ್ನು ಆರೋಪಿಗೆ ತೆರೆದ ನ್ಯಾಯಾಲಯದಲ್ಲಿ ಓದಿ ಹೇಳಿ, ಕೇಳಿದ ನಂತರ ಆರೋಪಿಯು ಕೊಟ್ಟ ಉತ್ತರವನ್ನು ನಾನೇ ಯಥಾವತ್ತಾಗಿ ಬರೆದುಕೊಂಡಿರುವುದು ನಿಜ ಮತ್ತು ಸತ್ಯವಾಗಿದೆಯೆಂದು ದೃಢೀಕರಿಸುತ್ತೇನೆ.)

ದಿನಾಂಕಃ 22.09.2025

ಸಹಿ
**(ಊರ್ಮಿಳ.ವಿ.)**
**1** ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು
ಮತ್ತು ಪ್ರ.ದ.ನ್ಯಾ.ದಂ., ತರೀಕೆರೆ.